# ಮಂಗಳೂರು ವಿಶ್ವವಿದ್ಯಾನಿಲಯ

ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ 10.02.2017ರಂದು ಮಧ್ಯಾಹ್ನ 3.00ಕ್ಕೆ ನಡೆದ ಸಿಂಡಿಕೇಟ್ ನ ಪ್ರಥಮ ವಿಶೇಷ ಸಭೆಯ ನಡಾವಳಿಗಳು.

**ಉಪಸ್ಥಿತ ಸದಸ್ಯರು**:

**ಅನುಪಸ್ಥಿತ ಸದಸ್ಯರು**:

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

**ಪ್ರಾರಂಭಿಕ**

ಮಾನ್ಯ ಕುಲಪತಿಯವರು ವಿಶೇಷ ಸಿಂಡಿಕೇಟ್ ಸಭೆಯನ್ನು ಕರೆದ ಉದ್ದೇಶವನ್ನು ಮಾನ್ಯ ಸದಸ್ಯರಿಗೆ ವಿವರಿಸಿದರು. ಅದರೊಂದಿಗೆ, ಮಂಗಳೂರು ವಿಶ್ವವಿದ್ಯಾನಿಲಯದ 35ನೇ ಘಟಿಕೋತ್ಸವವು ದಿನಾಂಕ:03.03.2017 ರಂದು ನಡೆಯಲಿರುವುದು ಎಂದು ತಿಳಿಸಿ ಸಭೆಯ ಎಲ್ಲಾ ಸದಸ್ಯರಿಗೆ ಸಕ್ರಿಯವಾಗಿ ಪಾಲ್ಗೊಳ್ಳಲು ಹಾಗೂ ವಿಶ್ವವಿದ್ಯಾನಿಲಯದ ಈ ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವಂತೆ ಕೋರಿದರು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ವಿ.ಸ.**1:1(2017)

**ವಿಷಯ**: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ, ಕುಶಾಲನಗರ, ಕೊಡಗು ಜಿಲ್ಲೆ ಇಲ್ಲಿ ಹೊಸ ಸ್ನಾತಕೋತ್ತರ ವಿಭಾಗಗಳ ಸ್ಥಾಪನೆ ಹಾಗೂ ಸೃಜನೆ ಬಗ್ಗೆ.

**ನಿರ್ಣಯ**:ಮೂರು ಸ್ನಾತಕೋತ್ತರ ವಿಭಾಗಗಳನ್ನು ಅಂದರೆ ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ ವಿಭಾಗ, ಸ್ನಾತಕೋತ್ತರ ಗಣಕ ವಿಜ್ಞಾನ ಅಧ್ಯಯನ ವಿಭಾಗ ಹಾಗೂ ಸ್ನಾತಕೋತ್ತರ ಪರಿಸರ ವಿಜ್ಞಾನ ವಿಭಾಗಗಳನ್ನು ಸ್ಥಾಪಿಸಲು ಮತ್ತು ಮೂರೂ ವಿಭಾಗಗಳಿಗೆ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸೃಜನೆ ಬಗ್ಗೆ ಮಂಡಿಸಲಾದ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ವಿ.ಸ.**1:2(2017)

**ವಿಷಯ**: ಮಂಗಳೂರು ವಿಶ್ವವಿದ್ಯಾನಿಲಯದ ಮಾನವ ಪ್ರಜ್ಞೆ ಮತ್ತು ಯೋಗ ವಿಜ್ಞಾನ ವಿಭಾಗಕ್ಕೆ ಹೆಚ್ಚುವರಿ ಬೋಧಕ/ಬೋಧಕೇತರ ಹುದ್ದೆಗಳ ಸೃಜನೆ ಬಗ್ಗೆ.

**ನಿರ್ಣಯ**: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟ್: ವಿ.ಸ.**1:3(2017)

**ವಿಷಯ**: ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಸ್ತು ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ**: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟ್: ವಿ.ಸ.** 1:4(2017)

**ವಿಷಯ**: ಪದವಿ ಮಟ್ಟದ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಆಂಡ್ ಆಫೀಸ್ ಮ್ಯಾನೇಜಮೆಂಟ್ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

**ನಿರ್ಣಯ**: ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಡಿಇವಿ: ವಿ.ಸ.**1:5(2017)

**ವಿಷಯ**:ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಮಂಗಳೂರು ಕೆಮಿಕಲ್ ಫರ್ಟಿಲೈಸರ್ (MCF),ಪಣಂಬೂರು, ಮಂಗಳೂರು ಹಾಗೂ ಪಿಲಿಕುಳ ರೀಜನಲ್ ಸೈನ್ಸ್ ಸೆಂಟರ್, ಮೂಡುಶೆಡ್ಡೆ, ಮಂಗಳೂರು ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ತಾತ್ವಿಕ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ**: ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಆಡಳಿತ: ವಿ.ಸ.**1:6(2017)

**ವಿಷಯ**: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Campus wide Surveillance Systems and RF Connectivityಅಳವಡಿಸಲು ಖರೀದಿ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

**ನಿರ್ಣಯ:** Campus wide Surveillance Systems and RF Connectivityವ್ಯವಸ್ಥೆಯನ್ನು ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ವಿಶ್ವವಿದ್ಯಾನಿಲಯಕಾಲೇಜಿನಲ್ಲಿಅಳವಡಿಸುವ ಕುರಿತು ಎಲ್ಲಾತಾಂತ್ರಿಕ ವಿಷಯಗಳ ಕುರಿತು ಸುದೀರ್ಘವಾಗಿಚರ್ಚಿಸಿನಂತರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ವಿ.ಸ.**1:7(2017)

**ವಿಷಯ:** ಭಾರತೀಯ ಸಂವಿಧಾನ ಅನುಚ್ಛೇದ 371(ಜೆ)ಯಅನುಷ್ಠಾನಕ್ಕೆಸಂಬಂಧಿಸಿದಂತೆ ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ - ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರನ್ವಯ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿನ ಮಂಜೂರಾದ ವಿವಿಧ ಬೋಧಕೇತರ ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗಳಲ್ಲಿ ಹೈದ್ರಾಬಾದ್ - ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇಕಡ 8% ಹುದ್ದೆಗಳನ್ನು ಮೀಸಲಿರಿಸಿ, ಸ್ಥಳೀಯ ವೃಂದ ರಚಿಸಿ ಖಾಲಿ ಹುದ್ದೆಗಳನ್ನು ಭರ್ತಿಗೊಳಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಹೈದ್ರಾಬಾದ್ - ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇಕಡ 8% ಬೋಧಕೇತರ ಹುದ್ದೆಗಳ ವಿವರಗಳ ಕುರಿತು ವಿಸ್ತೃತ ಚರ್ಚೆಯ ನಂತರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಆದ್ಯತೆಯಮೇರೆಗೆ ಹುದ್ದೆಗಳನ್ನು ಗುರುತಿಸಿ, ಮೀಸಲಾತಿ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ: ವಿ.ಸ.**1:8(2017)

**ವಿಷಯ:** ಭಾರತೀಯ ಸಂವಿಧಾನ ಅನುಚ್ಛೇದ 371(ಜೆ)ಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್ - ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರನ್ವಯ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿನ ಮಂಜೂರಾದ ವಿವಿಧ ಬೋಧಕ ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗಳಲ್ಲಿ ಹೈದ್ರಾಬಾದ್ - ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇಕಡ 8% ಹುದ್ದೆಗಳನ್ನು ಮೀಸಲಿರಿಸಿ, ಸ್ಥಳೀಯ ವೃಂದ ರಚಿಸಿ ಖಾಲಿ ಹುದ್ದೆಗಳನ್ನು ಭರ್ತಿಗೊಳಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಹೈದ್ರಾಬಾದ್ - ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇಕಡ 8% ಬೋಧಕ ಹುದ್ದೆಗಳ ವಿವರಗಳ ಕುರಿತು ವಿಸ್ತೃತ ಚರ್ಚೆಯ ನಂತರ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಆದ್ಯತೆಯ ಮೇರೆಗೆ ಹುದ್ದೆಗಳನ್ನು ಗುರುತಿಸಿ, ಮೀಸಲಾತಿ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.ಹಾಗೂ Residual Parent Cadreನಡಿ ವೃಂದ ನಿರ್ವಹಣೆ(Cadre Management) ಮೂಲಕ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕ ಹಾಗೂ ಪ್ರಾಧ್ಯಾಪಕಮತ್ತು ಸಹ ಪ್ರಾಧ್ಯಾಪಕ ಹುದ್ದೆಗಳ ಎದುರಾಗಿ ಸಹಾಯಕ ಪ್ರಧ್ಯಾಪಕ ಹುದ್ದೆಗಳನ್ನು ನೇಮಕ ಮಾಡುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಅನುಮೋದಿಸಲಾಯಿತು.

ಕುಲಸಚಿವರು　　　　　　　　　　　　ಕುಲಪತಿಗಳು